## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1255 |
| ಸದಸ್ಯರ ಹೆಸರು | ಶ್ರೀ ಜಗದೇವ್ ಗುತ್ತೇದಾರ್<br>(ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22-08-2025<br>(ಆರ್ಥಿಕ ಇಲಾಖೆಯಿಂದ ವರ್ಗಾವಣೆಗೊಂಡಿರುತ್ತದೆ) |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ<br>ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಈಡಿಗ ಸಮುದಾಯದ ಏಳಿಗೆಗೆ ನಾರಾಯಣ ಗುರು ಅಭಿವೃದ್ಧಿ ನಿಗಮ ಸ್ಥಾಪನೆಗೆ ಸರ್ಕಾರ ಆಶ್ವಾಸನೆಯನ್ನು ನೀಡಿರುವುದು ನಿಜವೇ: | ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30-03-2002ರಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯ ಕ್ರಮ ಸಂಖ್ಯೆ:4(a) ಯಿಂದ (z) ವರೆಗೆ ನಮೂದಾಗಿರುವ "ಈಡಿಗ-ಬಿಲ್ಲವ ಸೇರಿದಂತೆ ಒಟ್ಟು 26 ಜಾತಿಗಳ ಸಮಗ್ರ ಅಭಿವೃದ್ಧಿಗಾಗಿ ಸಂಖ್ಯೆ: ಹಿಂವಕ 214 ಬಿಸಿಎ 2022, ದಿನಾಂಕ:20-02-2023ರಲ್ಲಿ "ಶ್ರೀ ನಾರಾಯಣ ಗುರು ಅಭಿವೃದ್ಧಿ ನಿಗಮ"ವನ್ನು ಸ್ಥಾಪಿಸಿ ಆದೇಶಿಸಲಾಗಿರುತ್ತದೆ. |
| ಆ) | ಇಲ್ಲದಿದ್ದಲ್ಲಿ, ಸ್ಥಾಪನೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; | |
| ಇ) | ನಾರಾಯಣ ಗುರು ನಿಗಮಕ್ಕೆ ಸರ್ಕಾರ ನಿಗಧಿಪಡಿಸಿದ ಅನುದಾನವೆಷ್ಟು ಹಾಗೂ ಬಿಡುಗಡೆಯಾದ ಅನುದಾನವೆಷ್ಟು; ಉಳಿದ ಅನುದಾವನ್ನು ಯಾವಾಗ ಬಿಡುಗಡೆಗೊಳಿಸಲಾಗುವುದು? | ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002ರಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯ ಕ್ರಮ ಸಂಖ್ಯೆ:4(a) ಯಿಂದ (z) ವರೆಗೆ ಈಡಿಗ ಸೇರಿದಂತೆ ನಮೂದಾಗಿರುವ ಒಟ್ಟು 26 ಜಾತಿಗಳ ಸಮಗ್ರ ಅಭಿವೃದ್ಧಿಗಾಗಿ "ಶ್ರೀ ನಾರಾಯಣ ಗುರು ಅಭಿವೃದ್ಧಿ ಕೋಶ"ವನ್ನು ಸರ್ಕಾರದ ಆದೇಶ ಸಂಖ್ಯೆ: ಹಿಂವಕ 214 ಬಿಸಿಎ 2022, ದಿನಾಂಕ:29-10-2022ರಲ್ಲಿ ಸ್ಥಾಪಿಸಿ ಆದೇಶಿಸಲಾಗಿತ್ತು.<br><br>ಸದರಿ ಕೋಶಕ್ಕೆ 2023-24ನೇ ಸಾಲಿನಲ್ಲಿ ರೂ.10.00 ಕೋಟಿಗಳ ಅನುದಾನವನ್ನು ಒದಗಿಸಲಾಗಿರುತ್ತದೆ. ಸದರಿ ಅನುದಾನವು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಇರುತ್ತದೆ.<br><br>ಮುಂದುವರೆದು, ನಾರಾಯಣ ಗುರು ಅಭಿವೃದ್ಧಿ ಕೋಶದ ಬದಲಿಗೆ 'ಶ್ರೀ ನಾರಾಯಣ ಗುರು ಅಭಿವೃದ್ಧಿ ನಿಗಮ'ವನ್ನು ಸ್ಥಾಪನೆ ಮಾಡುವಂತೆ ಕೋರಿಕೆ ಇದ್ದುದರ ಮೇರೆಗೆ ದಿನಾಂಕ:20-02-2023ರ ಆದೇಶದಲ್ಲಿ 'ಶ್ರೀ ನಾರಾಯಣ ಗುರು ಅಭಿವೃದ್ಧಿ ನಿಗಮ'ವನ್ನು ಸ್ಥಾಪಿಸಲಾಗಿರುತ್ತದೆ. |

| | | |
|---|---|---|
| | | ಶ್ರೀ ನಾರಾಯಣ ಗುರು ಅಭಿವೃದ್ಧಿ ನಿಗಮವನ್ನು ಕಂಪನಿ ಕಾಯ್ದೆಯಡಿ ನೊಂದಾಯಿಸಲು ಕ್ರಮ ವಹಿಸಲಾಗುತ್ತಿದೆ. ಈ ನಿಗಮವು ಕಂಪನಿ ಕಾಯ್ದೆಯಡಿ ನೊಂದಾಯಿತಗೊಂಡ ನಂತರ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಬಗ್ಗೆ ಪರಿಶೀಲಿಸಲಾಗುವುದು.<br><br>ಸದರಿ ನಿಗಮವು ಕಂಪನಿ ಕಾಯ್ದೆಯಡಿ ನೋಂದಣಿಯಾಗಿ ಕಾರ್ಯಾರಂಭ ಆಗುವ ವರೆವಿಗೂ ಸದರಿ ಸಮುದಾಯಗಳ ಜನರಿಗೆ ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಅರ್ಹ ಫಲಾನುಭವಿಗಳಿಗೆ ಯೋಜನೆಗಳಲ್ಲಿನ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |

ಸಂಖ್ಯೆ: ಹಿಂವಕ 305 ಬಿಸಿಎ 2025

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.